ಕೊಡಗು ಮತ್ತು ಮೈಸೂರು ಜಿಲ್ಲೆಗೆ ಸಂಪರ್ಕ ಕಲ್ಪಿಸುವ ಸೇತುವೆ

10-ಶ್ರೀ ಎ.ಎಂ. ಬೆಳ್ಳಿಯಪ್ಪ (ಸೋಮವಾರಪೇಟೆ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಕೊಡಗು ಹಾಗೂ ಮೈಸೂರು ಜಿಲ್ಲೆಗೆ ಸಂಪರ್ಕ ಕಲ್ಪಿಸಲು ಸುಮಾರು 150 ವರ್ಷಗಳ ಹಿಂದೆ ಕಾವೇರಿ ನದಿಗೆ ಕುಶಾಲನಗರದಲ್ಲಿ ನಿರ್ಮಿಸಲಾಗಿರುವ ಸೇತುವೆಯು ಪೂರ್ಣ ಶಿಥಿಲಗೊಂಡು ಅಪಾಯದ ಹಂತದಲ್ಲಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?*

(ಬೆಂಗಳೂರು - ಮಂಗಳೂರು ರಾಜ್ಯ ಹೆದ್ದಾರಿಯನ್ನು ಕಲ್ಪಿಸುವ ಸೇತುವೆ)

ಆ) *ಹಾಗಿದ್ದಲ್ಲಿ ಸೇತುವೆಯನ್ನು ನೂತನವಾಗಿ ನಿರ್ಮಿಸಲು ಸರ್ಕಾರದವರು ಕ್ರಮ ಕೈಗೊಳ್ಳುವುದೇ?*

ಶ್ರೀ ಕೆ.ಹೆಚ್.ರಂಗನಾಥ್ (ಲೋಕೋಪಯೋಗಿ ಸಚಿವರು) :

ಅ) ಶಿಥಿಲಗೊಂಡು ಅಪಾಯ ಹಂತದಲ್ಲಿರುವುದಿಲ್ಲ.

ಆ) ಪರಿಶೀಲಿಸಲಾಗುವುದು.

ಸೋಮವಾರಪೇಟೆ ಕೆರೆಗಳ ಬಗ್ಗೆ

16 - ಶ್ರೀ ಎ.ಎಂ. ಬೆಳ್ಳಿಯಪ್ಪ (ಸೋಮವಾರಪೇಟೆ) :ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಸೋಮವಾರ ಪೇಟೆ ತಾಲ್ಲೂಕಿನಲ್ಲಿ ಎಷ್ಟು ಕೆರೆಗಳಿವೆ? ಈ ಕೆರೆಗಳಲ್ಲಿ ಎಷ್ಟು ಕೆರೆಗಳು ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಗೆ ಬರುತ್ತವೆ?*

ಆ) *ಈ ಕೆರೆಗಳಲ್ಲಿ ಎಷ್ಟು ಎಷ್ಟು ಕೆರೆಗಳಲ್ಲಿ ಹೂಳನ್ನು ತೆಗೆಯಲಾಗಿರುತ್ತದೆ?*

ಇ) *ಹೂಳೆತ್ತಲು ಬಾಕಿ ಇರುವ ಕೆರೆಗಳೆಷ್ಟು?*

ಈ) *ಇದಕ್ಕಾಗಿ ಎಷ್ಟು ಹಣವನ್ನು ಇಲಾಖೆಯಿಂದ ಬಿಡುಗಡೆ ಮಾಡಲಾಗಿದೆ?*

ಶ್ರೀ ಎಂ.ಪಿ. ಕೇಶವಮೂರ್ತಿ (ಸಣ್ಣ ನೀರಾವರಿ ರಾಜ್ಯ ಸಚಿವರು) :

ಅ) ಸೋಮವಾರ ಪೇಟೆ ತಾಲ್ಲೂಕಿನ ಒಟ್ಟು ಕೆರೆಗಳ ಸಂಖ್ಯೆ : 357 ಇವುಗಳಲ್ಲಿ ಒಟ್ಟು 24 ಕೆರೆಗಳು ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಗೆ ಬರುತ್ತದೆ.

ಆ) ಸಣ್ಣ ನೀರಾವರಿ ವ್ಯಾಪ್ತಿಯ 3 ಕೆರೆಗಳಲ್ಲಿ ಮತ್ತು ಜಿಲ್ಲಾ ಪರಿಷತ್ತಿನ ವ್ಯಾಪ್ತಿಯ 25 ಕೆರೆಗಳಲ್ಲಿ ಹೂಳನ್ನು ತೆಗೆಯಲಾಗಿರುತ್ತದೆ.

ಇ) ಸಣ್ಣ ನೀರಾವರಿ ವ್ಯಾಪ್ತಿಯ 21 ಕೆರೆಗಳು ಮತ್ತು ಜಿಲ್ಲಾ ಪರಿಷತ್ತಿನ ವ್ಯಾಪ್ತಿಯ 308 ಕೆರೆಗಳಲ್ಲಿ ಹೂಳು ತೆಗೆಯಬೇಕಾಗಿರುತ್ತದೆ.

ಈ) ಸಣ್ಣ ನೀರಾವರಿ ಇಲಾಖೆಗಳಲ್ಲಿ 0.90 ಲಕ್ಷ ರೂ. ಮತ್ತು ಜಿಲ್ಲಾ ಪರಿಷತ್ತಿನಿಂದ 11.77 ಲಕ್ಷರೂ ಬಿಡುಗಡೆ ಮಾಡಲಾಗಿದೆ.

ಗದಗದಲ್ಲಿ ಧಾರವಾಡದಲ್ಲಿರುವ ಜಿಲ್ಲಾ ನ್ಯಾಯಾಧೀಶರ ನ್ಯಾಯಾಲಯ ನಡೆಸುವ ಬಗ್ಗೆ

165-ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಗದಗದಲ್ಲಿ ಧಾರವಾಡದಲ್ಲಿರುವ ಜಿಲ್ಲಾ ನ್ಯಾಯಾಲಯ ನಡೆಸುವಂತೆ ಗದಗ ವಕೀಲರ ಸಂಘದಿಂದ ಮನವಿ ಸರ್ಕಾರಕ್ಕೆ ಬಂದಿದೆಯೇ?*